Bruhat Bengaluru Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ 34, ಗಂಗೇನಹಳ್ಳಿ, ಬೆಂಗಳೂರು

ಸಂಖ್ಯೆ:ಸ.ಅ/ವಾ-34/ಪಿ.ಆರ್./19/2020-21 ದಿನಾಂಕ: 21/09/2021

## ವಾರ್ಡ್ ಸಮಿತಿ ಸಭೆಯ ನಡವಳಿಗಳು

ವಿಷಯ: ಮಾನ್ಯ ಆಯುಕ್ತರು ಬಿಬಿ.ಎಂಪಿ ರವರ ಆದೇಶ ಸಂಖ್ಯೆ: ಬಿ12(5)ಪಿ.ಆರ್./35/2021 ದಿನಾಂಕ 21/09/2020 ರವರ ಆದೇಶದಂತೆ ದಿನಾಂಕ 21/09/2021 ರಂದು ಬೆಳಿಗ್ಗೆ 11.30 ಗಂಟೆಗೆ ವಾರ್ಡ್ ನಂ.34. ಗಂಗಾನಗರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

### ಸಭೆಗೆ ಹಾಜರಾಗಿದ್ದವರ ವಿವರಗಳು

| ಕ್ರ.ಸಂ. | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1 | ಶ್ರೀ. ತಿಮ್ಮರಸ | ವಾಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ. ರಾಮ್‌ರಾವ್ | ಸಹಾಯಕ ಅಭಿಯಂತರರು ವಾರ್ಡ್ ನಂ.34 |
| 3 | ಶ್ರೀಮತಿ ಸುವರ್ಣ ದೇವಿ | ವರ್ಕ್ ಇನ್ಸ್‌ಪೆಕ್ಟರ್, ಬಿಡಬ್ಲ್ಯೂ.ಎಸ್.ಎಸ್.ಬಿ. |
| 4 | ಶ್ರೀ. ಭೂಮೇಶ್ | ಹಿರಿಯ ಆರೋಗ್ಯ ಪರಿವೀಕ್ಷಕರು |
| 5 | ಶ್ರೀ. ಕೆ. ವಿಧ್ಯಾಧರ್ | ಕಿರಿಯ ಆರೋಗ್ಯ ಪರಿವೀಕ್ಷಕರು |
| 6 | ಶ್ರೀಮತಿ ವಾಲಸಮ್ಮ ಕೆ.ಜಿ. | ಸಾರ್ವಜನಿಕರು |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯಾದ ಶ್ರೀ. ತಿಮ್ಮರಸ ಮತ್ತು ಕಾರ್ಯದರ್ಶಿ, ಸಹಾಯಕ ಅಭಿಯಂತರರಾದ ಶ್ರೀ. ರಾಮ್‌ರಾವ್ ರವರು ಸಭೆಗೆ ಆಗಮಿಸಿದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಾಗೂ ಅಧ್ಯಕ್ಷರಿಗೆ ವಾರ್ಡ್ ಸಭೆ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ವಿಸ್ತಾರವಾಗಿ ಪ್ರಸ್ತಾಪಿಸಲು ಕೋರಲಾಯಿತು.

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್ ನಂ.34 ರವರು ಸ್ವಯಂ ಪರಿಚಯ ಮಾಡಿಕೊಂಡು ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ ನಿರ್ವಹಣೆ, ರಸ್ತೆ ಗುಂಡಿ ಮುಚ್ಚುವ ಬಗ್ಗೆ, ಬೀದಿ ದೀಪಗಳ ನಿರ್ವಹಣೆ ಬಗ್ಗೆ ಮತ್ತು ಕೋವಿಡ್-19 ಸಾಂಕ್ರಾಮಿಕ ರೋಗಕ್ಕೆ ಸಂಬಂಧಿಸಿದ ವಿಷಯಗಳನ್ನು ಚರ್ಚಿಸಲು ಸಾರ್ವಜನಕರಿಗೆ ತಿಳಿಯಪಡಿಸಿದರು.

- ಸಿ.ಪಿ.ವಿ. ಬ್ಲಾಕ್, 5ನೇ ಮೈನ್, 5ನೇ ಕ್ರಾಸ್ ಡೀ ಸಿಲ್ಟಿಂಗ್ ಕೆಲಸ ಮಾಡಿಸುವ ಕುರಿತು ತಿಳಿಯಪಡಿಸಿದರು.
- ಕೆ.ಹೆಚ್.ಎಂ. ಬ್ಲಾಕ್, 4ನೇ ಮೈನ್‌ನಲ್ಲಿ ಬೋರ್‌ವೆಲ್ ಹೋಲ್‌ಗೆ ಸ್ಲಾಬ್‌ನ್ನು ಹಾಕುವ ವಿಷಯವನ್ನು ತಿಳಿಸಿದರು.

- ಎಂ.ಎಲ್.ಎ. ಲೇಔಟ್‌ನ ನಂದಿನಿ ಹಾಲ್ ಭೂತ್ ಎದುರುಗಡೆ ರಸ್ತೆಯಲ್ಲಿನ ಸ್ಯಾನಿಟರಿ ಲೈನ್ ಬ್ಲಾಕ್ ಆಗಿರುವುದನ್ನು ಸರಿಪಡಿಸುವ ವಿಷಯದರ ಕುರಿತು ಚರ್ಚೆ ಮಾಡಿದರು.
- 4ನೇ ಮೈನ್ ಮತ್ತು 5ನೇ ಮೈನ್, ಗಂಗಾನಗರ ಎಕ್ಸ್‌ಟೆಂಷನ್‌ನಲ್ಲಿ ಸರಿಯಾಗಿ ಸಫಾಯ್‌ಗಾರರು ಸರಿಯಾಗಿ ಸ್ವಚ್ಛ ಮಾಡುವುದರ ಕುರಿತು ಚರ್ಚೆ ಮಾಡಿದರು.

**ಕಾರ್ಯದರ್ಶಿಗಳು**
**ಹಾಗೂ ಸಹಾಯಕ ಅಭಿಯಂತರರು**
ವಾರ್ಡ್ ನಂ.34

**ಅಧ್ಯಕ್ಷರು**
**ಹಾಗೂ ನೋಡಲ್ ಅಧಿಕಾರಿಗಳು**
ವಾರ್ಡ್ ನಂ.34

**ಪ್ರತಿಯನ್ನು:**

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರ ಕಛೇರಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು(ಪೂರ್ವ) ಬಿಬಿಎಂಪಿರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿಬಿಎಂಪಿರವರ ಅವಗಾಹನೆಗೆ ಸಲ್ಲಿಸಿದೆ.
5. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
6. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ ರವರ ಅವಗಾಹನೆಗೆ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ), ಬಿಬಿಎಂಪಿರವರ ಅವಗಾಹನೆಗೆ ಕಳುಹಿಸಿದೆ.
9. ಸಹಾಯಕ ಅಭಿಯಂತರರು (ವಿದ್ಯುತ್/ಪುಲಿಕೇಶಿನಗರ), ಬಿಬಿಎಂಪಿರವರ ಅವಗಾಹನೆಗೆ ಕಳುಹಿಸಿದೆ.
10. ಕಛೇರಿ ಕಡತಕ್ಕೆ.